# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ವಿಶ್ವಕರ್ಮ ಫೌಂಡೇಷನ್ ಸಂಸ್ಥೆಯ ವತಿಯಿಂದ ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು, ಚಿಕ್ಕಲ್ಲೂರು ಹೊಸಮಠದ ಶ್ರೀ ಸಿದ್ದಾಪ್ಪಾಜಿ ದೇವಸ್ಥಾನದಲ್ಲಿ ನಿರ್ಮಿಸುತ್ತಿರುವ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 196 BRS 2022, ದಿನಾಂಕ:07.10.2022.

*******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ: 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ವ್ಯಾಪ್ತಿಯಲ್ಲಿ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ವ್ಯಾಪ್ತಿಯಲ್ಲಿ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2022-23ನೇ ಸಾಲಿಗೆ ವಿಶ್ವಕರ್ಮ ಫೌಂಡೇಷನ್ ಸಂಸ್ಥೆಯ ವತಿಯಿಂದ ಚಾಮರಾಜ ನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು, ಚಿಕ್ಕಲ್ಲೂರು ಹೊಸಮಠದ ಶ್ರೀ ಸಿದ್ದಾಪ್ಪಾಜಿ ದೇವಸ್ಥಾನದಲ್ಲಿ ನಿರ್ಮಿಸುತ್ತಿರುವ ಸಮುದಾಯ ಭವನ ನಿರ್ಮಾಣಕ್ಕೆ ರೂ.200.00 ಲಕ್ಷಗಳನ್ನು (Rupees two hundred lakh only) ಲೆಕ್ಕ ಶೀರ್ಷಿಕೆ:2225-03-001-0-05 ವಿವಿಧ ಸಮುದಾಯಗಳ ಅಭಿವೃದ್ಧಿ - 103 - ಸಹಾಯನುದಾನ –ಸಾಮಾನ್ಯರಡಿ ಹೆಚ್ಚುವರಿಯಾಗಿ ಮಂಜೂರು ಮಾಡಿ ಆದೇಶಿಸಲಾಗಿದೆ.

ಮೇಲೆ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 640 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:17-10-2022**

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ವಿಶ್ವಕರ್ಮ ಫೌಂಡೇಷನ್ ಸಂಸ್ಥೆಯ ವತಿಯಿಂದ ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು, ಚಿಕ್ಕಲ್ಲೂರು ಹೊಸಮಠದ

17/10/22

....2

ಶ್ರೀ ಸಿದ್ದಾಪ್ಪಾಜಿ ದೇವಸ್ಥಾನದಲ್ಲಿ ನಿರ್ಮಿಸುತ್ತಿರುವ ಸಮುದಾಯ ಭವನ ನಿರ್ಮಾಣಕ್ಕೆ ರೂ.200.00 ಲಕ್ಷ (ಎರಡು ನೂರು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಷರತ್ತುಗಳು:

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (1)ರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014ರ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದು. ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ಸಂಸ್ಥೆಯಿಂದ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಮಾರ್ಗಸೂಚಿಗಳನುಸಾರ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು.

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಕಟ್ಟಡದ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು ಚಾಮರಾಜನಗರ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.

3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವು ನಿಯಮಾನುಸಾರ ಪಾರದರ್ಶಕವಾಗಿ ಸದ್ಬಳಕೆ ಆಗುತ್ತಿರುವ ಬಗ್ಗೆ ಹಾಗೂ ಮಾರ್ಗಸೂಚಿಗಳಂತೆ ಪ್ರತಿ ತಿಂಗಳು ಸಂಬಂಧಿತ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಗೆ ನಿಗಧಿತ ನಮೂನೆಯಲ್ಲಿ ವರದಿಯನ್ನು ಪಡೆಯತಕ್ಕದ್ದು, ವರದಿಯ ಆಧಾರದ ಮೇಲೆ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.

4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.

5. ಅನುದಾನವನ್ನು ಕಟ್ಟಡದ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.

6. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರದಿಂದ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಸದರಿ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದ ಲೆಕ್ಕಶೀರ್ಷಿಕೆ:2225-03-001-0-05 (103)ರಡಿ ಒದಗಿಸುವ ಹೆಚ್ಚುವರಿ ಅನುದಾನದಿಂದ ಭರಿಸತಕ್ಕದ್ದು.

17/10/22

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 613 ವೆಚ್ಚ-3/2022 ದಿನಾಂಕ:10.10.2022 ರನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 17/10/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ), ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
4. ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
5. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ, ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.